# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2245 |
| ಸದಸ್ಯರ ಹೆಸರು | : | ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 26-03-2021. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಮಾಸಿಕ ವೇತನವು ನಿಗಧಿತ ಅವಧಿಯಲ್ಲಿ ಸಂದಾಯವಾಗದೇ ಇರುವುದರಿಂದ ಸಿಬ್ಬಂದಿಗಳು ಆರ್ಥಿಕ ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಬಂದಿದ್ದಲ್ಲಿ, ಸದರಿ ಸಿಬ್ಬಂದಿಗಳಿಗೆ ಮಾಸಿಕ ವೇತನ ಸಂದಾಯಕ್ಕಾಗಿ ಸರ್ಕಾರವು ಕೈಗೊಂಡ ಕ್ರಮಗಳೇನು? | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಂತೆ ಗ್ರಾಮ ಪಂಚಾಯತಿಯು ತನ್ನ ಸಿಬ್ಬಂದಿಗಳ ವೇತನವನ್ನು ಗ್ರಾಮ ಪಂಚಾಯತಿ ನಿಧಿಯಿಂದ ಅಂದರೆ ತನ್ನ ಸ್ವಂತ ಸಂಪನ್ಮೂಲದಿಂದ ಪಾವತಿಸುವುದು ಪ್ರತಿಯೊಂದು ಗ್ರಾಮ ಪಂಚಾಯತಿಯ ಕರ್ತವ್ಯವಾಗಿರುತ್ತದೆ. ಆದರೂ ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಸಂಪನ್ಮೂಲದ ಕೊರತೆಯಿಂದ ಸಮಯಕ್ಕೆ ಸರಿಯಾಗಿ ವೇತನ ಪಾವತಿಸದ ಕಾರಣ ಸರ್ಕಾರವು ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡುವ ಅನುದಾನದಲ್ಲಿ ಭಾಗಶಃ ವೇತನಕ್ಕಾಗಿ ಪ್ರತ್ಯೇಕ ಅನುದಾನವನ್ನು ಬಿಡುಗಡೆ ಮಾಡುತ್ತಿದೆ.<br><br>ಪ್ರಸ್ತುತ ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ 1) ಬಿಲ್ ಕಲೆಕ್ಟರ್, 2) ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ / ಡಾಟಾ ಎಂಟ್ರಿ ಆಪರೇಟರ್, 3) ವಾಟರ್ ಆಪರೇಟರ್, 4) ಅಟೆಂಡೆಂಟ್ ಮತ್ತು 5) ಕ್ಲೀನರ್ಸ್ ಸೇರಿದಂತೆ ಒಟ್ಟು 50776 ನೌಕರರಿಗೆ ಸರ್ಕಾರದಿಂದ ವೇತನ ಪಾವತಿಸಲು ಇಎಫ್‌ಎಂಎಸ್ ತಂತ್ರಾಂಶದಲ್ಲಿ ವೇತನಕ್ಕಾಗಿ ನಮೂದಿಸಲಾಗಿದ್ದು, ವೇತನಕ್ಕಾಗಿ ವಾರ್ಷಿಕವಾಗಿ ರೂ.783.61 ಕೋಟಿ ಅನುದಾನದ ಅವಶ್ಯಕತೆ ಇದ್ದು, ರೂ. 511.20 ಕೋಟಿಗಳನ್ನು ಸರ್ಕಾರದಿಂದ ತ್ರೈಮಾಸಿಕವಾಗಿ 4 ಕಂತುಗಳಲ್ಲಿ ಬಿಡುಗಡೆ ಮಾಡಲಾಗುತ್ತಿದೆ.<br><br>ವೇತನಕ್ಕಾಗಿ ಕೊರತೆಯಾಗುವ ರೂ.272.41 ಕೋಟಿಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾರ್ಯಕ್ರಮದ ಸೇವೆ ನೀಡುವವರಿಗೆ ಸದರಿ ಯೋಜನೆಯಡಿ ರೂ. 61.50 ಕೋಟಿಗಳನ್ನು ವಾರ್ಷಿಕವಾಗಿ 2 ಕಂತುಗಳಲ್ಲಿ ಬಿಡುಗಡೆ ಮಾಡಲಾಗುತ್ತದೆ. |

| | | |
|---|---|---|
| | | 15ನೇ ಹಣಕಾಸು ಆಯೋಗದ ಅನುದಾನದಡಿಯಲ್ಲಿ ಕುಡಿಯುವ ನೀರು ನಿರ್ವಹಣೆ, ನೈರ್ಮಲ್ಯ ಕಾಪಾಡುವ ಕಾರ್ಯಕ್ರಮಗಳಿಗೆ ಅನುದಾನವನ್ನು ಮೀಸಲಿರಿಸಲಾಗಿದ್ದು, ಕುಡಿಯುವ ನೀರು ಸರಬರಾಜು ಮತ್ತು ಸ್ವಚ್ಛತೆ ಸೇವೆ ನೀಡುವವರಿಗೆ 15ನೇ ಹಣಕಾಸು ಆಯೋಗದ ಅನುದಾನದಡಿ ರೂ.160.90 ಕೋಟಿಗಳ ಅನುದಾನ ಮತ್ತು ಸ್ವಂತ ಸಂಪನ್ಮೂಲದಲ್ಲಿ 50.01 ಕೋಟಿಗಳನ್ನು ಗ್ರಾಮ ಪಂಚಾಯತಿಗಳು ಸಿಬ್ಬಂದಿಗಳ ವೇತನಕ್ಕಾಗಿ ಭರಿಸಲು ಅನುದಾನವನ್ನು ವರ್ಗಾವಣೆ ಮಾಡಿಕೊಂಡು ಸಿಬ್ಬಂದಿಗಳ ವೇತನ ಭರಿಸಲು ಕ್ರಮ ಕೈಗೊಳ್ಳುವಂತೆ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಲಾಗಿದೆ. |

ಸಂ. ಗ್ರಾಅಪ 176 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.